ಚಿಕ್ಕಮಗಳೂರು ಜಿಲ್ಲೆಯಲ್ಲಿ ಶೀತಲ ಕೇಂದ್ರ ನಿರ್ಮಾಣ

761 - ಶ್ರೀ ಸಿ. ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿಕ್ಕಮಗಳೂರು ಜಿಲ್ಲೆಯಲ್ಲಿ ಶೀತಲ ಕೇಂದ್ರವನ್ನು (ಕೋಲ್ಡ್ ಸ್ಟೋರೇಜ್) ಪ್ರಾರಂಭಿಸಲು ಉದ್ದೇಶಿಸಿದೆಯೇ?*

ಆ) *ಹಾಗಿದ್ದಲ್ಲಿ ಯಾವ ಯಾವ ತಾಲ್ಲೂಕುಗಳನ್ನು ಗುರುತಿಸಿದೆ?*

ಇ) *ಇದರ ಅಂದಾಜು ವೆಚ್ಚ ಎಷ್ಟು? (ವಿವರ ನೀಡುವುದು)*

ಶ್ರೀ ಡಿ. ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಹೌದು.

ಆ) ಸ್ಥಾಪನೆಯಾಗುವ ಸ್ಥಳವನ್ನು ನಿಖರವಾಗಿ ಇನ್ನು ಗುರುತಿಸಿರುವುದಿಲ್ಲ.

ಇ) ಹಣ್ಣು ತರಕಾರಿಗಳ ಸಂಗ್ರಹಣಾ ಕೇಂದ್ರ, ಕೇಂದ್ರೀಯ ಗೋದಾಮು ಮತ್ತು ಶೀತಲ ಗೃಹ ಸೇರಿ ಒಟ್ಟಾರೆ 13.00 ಲಕ್ಷ ರೂ.ಗಳ ಅಂದಾಜು ಮಾಡಲಾಗಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳು

762 - ಶ್ರೀ ಸಿ. ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿಕ್ಕಮಗಳೂರು ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆವತಿಯಿಂದ ಯಾವ ಯಾವ ತೋಟಗಾರಿಕಾ ಬೆಳೆಗಳನ್ನು ಬೆಳೆಯಲಾಗಿದೆ? (ಇದರ ಮಾಹಿತಿ ನೀಡುವುದು)*

ಆ) *ಈ ಬೆಳೆಗಳ ಮಾರಾಟಕ್ಕಾಗಿ ಸರ್ಕಾರ ಹಮ್ಮಿ ಕೊಂಡಿರುವ ಕಾರ್ಯಕ್ರಮವೇನು?*

ಇ) *ತೋಟಗಾರಿಕಾ ಬೆಳೆಗಳಿಗೆ ದರ ನಿಗದಿಪಡಿಸುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ?*

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳನ್ನು ಒಟ್ಟು 80,000 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳ ಮಾರಾಟಕ್ಕಾಗಿ ಹಾಪ್‌ಕಾಮ್ಸ್ ಮತ್ತು ಜಿಲ್ಲಾ ತೋಟಗಾರಿಕೆ ಮಾರಾಟ ಸಂಘಗಳಿಂದ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಯೋಜಿಸಲಾಗಿದೆ ರಾಜ್ಯದಾದ್ಯಂತ ಸಮಗ್ರ ಹಣ್ಣು ಮತ್ತು ತರಕಾರಿ ಮಾರಾಟ ವ್ಯವಸ್ಥೆ ಕಲ್ಪಿಸಲು ಚಿಕ್ಕಮಗಳೂರು ಜಿಲ್ಲೆಯು ಸೇರಿದಂತೆ 13 ಕೋಟಿ ರೂ.ಗಳ ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲಾ ತೋಟಗಾರಿಕಾ ಮಾರಾಟ ಸಂಘವು 40.75 ಲಕ್ಷ ರೂ.ಗಳ ಯೋಜನೆಯನ್ನು